# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1396
ಉತ್ತರಿಸಬೇಕಾದ ದಿನಾಂಕ : 20.03.2025
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನಲ್ಲಿ ಅತ್ಯಾಧುನಿಕ ಕ್ರೀಡಾ ನಗರ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಹೌದು<br><br>ಬೆಂಗಳೂರಿನ ಉತ್ತರ ತಾಲ್ಲೂಕಿನಲ್ಲಿ ಲಭ್ಯವಿರುವ ಅಂದಾಜು 70 ಎಕರೆ ನಿವೇಶನದಲ್ಲಿ ಅತ್ಯಾಧುನಿಕ ಮತ್ತು ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡಾ ಸಮುಚ್ಚಯವನ್ನು ಒಳಗೊಂಡ ಕ್ರೀಡಾ ನಗರವನ್ನು (Sports City) ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು ಎಂದು 2024-25 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆ ಮಾಡಲಾಗಿದೆ. ಸದರಿ ಕಾರ್ಯಕ್ರಮಕ್ಕೆ ಸೂಕ್ತ ಕ್ರಿಯಾ ಯೋಜನೆಯನ್ನು ರೂಪಿಸಿಕೊಂಡು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂ:ವೈ.ಎಸ್.ಡಿ./ಇಪಿಇ/99/2024, ದಿ:15-06-2024ರಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ.<br><br>ಯಲಹಂಕ ತಾಲ್ಲೂಕು, ಹೆಸರಘಟ್ಟ ಹೋಬಳಿ, ಮಾವಳ್ಳಿಪುರ ಗ್ರಾಮದ ಸ.ನಂ.8 ರಲ್ಲಿನ 100 ಎಕರೆ ನಿವೇಶನದಲ್ಲಿ ಅತ್ಯಾಧುನಿಕ ಮತ್ತು ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡಾ ಸಮುಚ್ಚಯವನ್ನು ಒಳಗೊಂಡ ಕ್ರೀಡಾ ನಗರವನ್ನು (Sports City) ಸ್ಥಾಪಿಸಲು ಗುರುತಿಸಿರುವ ನಿವೇಶನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆರವರಿಗೆ ಕೋರಲಾಗಿದೆ.<br><br>ಸದರಿ ನಿವೇಶನವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಗೊಂಡ ನಂತರ ಆಯವ್ಯಯ ಭಾಷಣದ ಘೋಷಣೆಯಂತೆ ಕ್ರೀಡಾ ನಗರವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು. |
| ಆ) | ಇದ್ದಲ್ಲಿ, ಪೂರ್ಣ ಪ್ರಮಾಣದ ಕ್ರೀಡಾ ನಗರ ಯಾವಾಗ ಅಸ್ತಿತ್ವಕ್ಕೆ ಬರಲಿದೆ; | |
| ಇ) | ಕ್ರೀಡಾ ನಗರದ ಪ್ರಮುಖ ಸೌಲಭ್ಯಗಳೇನು? (ವಿವರ ಒದಗಿಸುವುದು) | ಕ್ರೀಡಾ ನಗರದ ನಿರ್ಮಾಣಕ್ಕೆ ನಿವೇಶನ ಹಸ್ತಾಂತರಗೊಂಡ ನಂತರ ಸ್ಥಳ ಅಧ್ಯಯನ ಮಾಡಿ ಆರ್ಥಿಕ ಕಾರ್ಯ ಸಾಧ್ಯತಾ ವರದಿ ಹಾಗೂ ಯೋಜನಾ ವರದಿಯನ್ನು ತಯಾರಿಸಿ, ಒದಗಿಸಬಹುದಾದ ಸೌಲಭ್ಯಗಳನ್ನು ಅಂತಿಮಗೊಳಿಸಲಾಗುವುದು. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/68/2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ